ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

# ಪತ್ರಿಕಾ ತುಣುಕುಗಳು
# PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE 2/9/2020

**ಸಣ್ ಸುದ್ದಿ**

## ಸೆ.21ರಿಂದ 8 ದಿನಗಳ ವಿಧಾನಸಭಾ ಕಲಾಪ

ಬೆಂಗಳೂರು: ಈ ತಿಂಗಳ 21ರಿಂದ ಆರಂಭವಾಗುವ ವಿಧಾನಸಭಾ ಅಧಿವೇಶನದ ಕಾರ್ಯಕಲಾಪಗಳ ಪಟ್ಟಿ ಪ್ರಕಟವಾಗಿದ್ದು, ಅಂದು ಬೆಳಗ್ಗೆ 11 ಗಂಟೆಗೆ ಅಧಿವೇಶನ ಸಮಾವೇಶಗೊಳ್ಳಲಿದೆ. ಶನಿವಾರ ಮತ್ತು ಭಾನುವಾರದ ರಜಾ ದಿನಗಳನ್ನು ಹೊರತುಪಡಿಸಿ 8 ದಿನಗಳ ಕಾಲ ಅಧಿವೇಶನ ನಡೆಸಲು ನಿರ್ಧರಿಸಲಾಗಿದೆ. ಸೆ.30ಕ್ಕೆ ಮುಕ್ತಾಯವಾಗಲಿದೆ. ಕೊರೋನಾ ಸೋಂಕು ಭೀತಿಯಿಂದಾಗಿ ಮುನ್ನಚ್ಚರಿಕೆ ಕ್ರಮ ಕೈಗೊಳ್ಳಲು ವಿಧಾನಸಭಾ ಸಚಿವಾಲಯ ಮುಂದಾಗಿದೆ. ಸಚಿವರು, ಶಾಸಕರ ಆಸನದಲ್ಲಿ ಮುನ್ನಚ್ಚರಿಕೆ ಕ್ರಮವಹಿಸಲಾಗಿದೆ. ಅಧಿಕಾರಿಗಳು ಮತ್ತು ಪತ್ರಕರ್ತರ ಗ್ಯಾಲರಿಯಲ್ಲಿ ಯಾವ ಕ್ರಮ ಕೈಗೊಳ್ಳಬೇಕು ಎಂಬುದರ ಕುರಿತು ಚರ್ಚಿಸಿ ಶೀಘ್ರ ನಿರ್ಣಯ ಕೈಗೊಳ್ಳಲಾಗುತ್ತದೆ ಎಂದು ತಿಳಿದುಬಂದಿದೆ.